## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆದಿಚುಂಚನಗಿರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ನೆಲಮಂಗಲ, ಬೆಂಗಳೂರು ಇಲ್ಲಿ ಹೊಸದಾಗಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಆಯುಷ್ ನಿರ್ದೇಶಕರ ಪ್ರಸ್ತಾವನೆ ಸಂಖ್ಯೆ:ಆಯುಷ್/149/ವೈಶಿ(2)/2016-17, ದಿನಾಂಕ:01.10.2018.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ನಮೂನೆ-5ರ ಸಂಖ್ಯೆ:ACA/AFF/AY-82/2018-19, ದಿನಾಂಕ:27.03.2017.
3. ಸರ್ಕಾರದ ಪತ್ರ ಸಂಖ್ಯೆ:ಆಕುಕ 101 ಪಿಟಿಡಿ 2017, ದಿನಾಂಕ:22.04.2017.
4. ಆಯುಷ್ ಮಂತ್ರಾಲಯದ ಪತ್ರ ಸಂಖ್ಯೆ:F.No.R.12011/33/2017-EP (IM-1), dated: 28.09.2018.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ಪ್ರಸ್ತಾವನೆಯಲ್ಲಿ, ನಿರ್ದೇಶಕರು, ಆಯುಷ್ ಇಲಾಖೆ, ಬೆಂಗಳೂರು ಇವರು ಆದಿಚುಂಚನಗಿರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ನೆಲಮಂಗಲ, ಬೆಂಗಳೂರು ಇಲ್ಲಿ 2018-19ನೇ ಶೈಕ್ಷಣಿಕ ಸಾಲಿನಿಂದ 100 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಅಫಿಲಿಯೇಷನ್ ನೀಡಿದ್ದರ ಮೇರೆಗೆ ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಒದಗಿಸಲಾಗಿದ್ದು, ಪ್ರಸ್ತುತ ಭಾರತ ಸರ್ಕಾರದ ಆಯುಷ್ ಮಂತ್ರಾಲಯವು ಸದರಿ ಕೋರ್ಸ್ ಪ್ರಾರಂಭಿಸಲು ಕೆಲವು ಷರತ್ತಿಗೊಳಪಟ್ಟು ಅನುಮತಿ ನೀಡಿರುತ್ತದೆ. ಅದರಂತೆ 2018-19ನೇ ಶೈಕ್ಷಣಿಕ ಸಾಲಿನಿಂದ ಅನ್ವಯಿಸುವಂತೆ ಸರ್ಕಾರದ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ನಮೂನೆ-5ರ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಆದಿಚುಂಚನಗಿರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ನೆಲಮಂಗಲ, ಬೆಂಗಳೂರು ಇಲ್ಲಿ 2018-19ನೇ ಶೈಕ್ಷಣಿಕ ಸಾಲಿಗೆ 100 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಕಾನ್ಸೆಂಟ್ ಆಫ್ ಅಫಿಲಿಯೇಷನ್ ನೀಡಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (3)ರ ಸರ್ಕಾರದ ಪತ್ರದೊಂದಿಗೆ, ಆದಿಚುಂಚನಗಿರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ನೆಲಮಂಗಲ, ಬೆಂಗಳೂರು ಇಲ್ಲಿ 2018-19ನೇ ಶೈಕ್ಷಣಿಕ ಸಾಲಿನಿಂದ 100 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ರಾಜ್ಯ ಸರ್ಕಾರದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಭಾರತ ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ (4)ರ ಪತ್ರದಲ್ಲಿ ಭಾರತ ಸರ್ಕಾರದ ಆಯುಷ್ ಮಂತ್ರಾಲಯವು ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಇವರು ಸರ್ವೆ ನಂ. 112, ನಗರೂರು, ದಾಸನಪುರ ಹೋಬಳಿ, ನೆಲಮಂಗಲ, ಬೆಂಗಳೂರು ದಕ್ಷಿಣ ಇಲ್ಲಿ ಆದಿಚುಂಚನಗಿರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಎಂಬ ಹೆಸರಿನಲ್ಲಿ ಹೊಸದಾಗಿ 100 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು  ಪ್ರಾರಂಭಿಸಲು ಅನುಮತಿ ನೀಡಿರುತ್ತದೆ.

ಆಯುಷ್ ನಿರ್ದೇಶಕರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್, ಶ್ರೀ ಆದಿಚುಂಚನಗಿರಿ ಕ್ಷೇತ್ರ, ನಾಗಮಂಗಲ ತಾಲ್ಲೂಕು ಇವರು 2018-19ನೇ ಶೈಕ್ಷಣಿಕ ಸಾಲಿನಿಂದ ನಗರೂರಿನಲ್ಲಿ ಆದಿಚುಂಚನಗಿರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಎಂಬ ಹೆಸರಿನಲ್ಲಿ ಹೊಸದಾಗಿ 100 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 259 ಪಿಟಿಡಿ 2018, ಬೆಂಗಳೂರು, ದಿನಾಂಕ:01.10.2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್, ಶ್ರೀ ಆದಿಚುಂಚನಗಿರಿ ಕ್ಷೇತ್ರ, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ ಇವರು 2018-19ನೇ ಶೈಕ್ಷಣಿಕ ಸಾಲಿನಿಂದ ಸರ್ವೆ ನಂ. 112, ನಗರೂರು, ದಾಸನಪುರ ಹೋಬಳಿ, ನೆಲಮಂಗಲ, ಬೆಂಗಳೂರು ದಕ್ಷಿಣ ಇಲ್ಲಿ ಆದಿಚುಂಚನಗಿರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಎಂಬ ಹೆಸರಿನಲ್ಲಿ ಹೊಸದಾಗಿ 100 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಭಾರತ ಸರ್ಕಾರ/ಸಿ.ಸಿ.ಐ.ಎಂ. ನವದೆಹಲಿ ಇವರಿಂದ ಅನುಮತಿ/ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಭಾರತ ಸರ್ಕಾರ/ಸಿ.ಸಿ.ಐ.ಎಂ. ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ಕೇಂದ್ರ/ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರದ ಪೂರ್ವಾನುಮತಿಯಿಲ್ಲದೆ ಸಂಸ್ಥೆಯ ಹೆಸರು ಮತ್ತು ವಿಳಾಸವನ್ನು ಬದಲಾಯಿಸಬಾರದು.
8. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

ಇವರಿಗೆ:

1) Secretary to Government, Ministry of AYUSH, AYUSH Bhawan, B.Block, GPO Complex, New Delhi-110 023. (R.12011/06/2015-EP (IM-1).

2) ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು-09.
3) ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು.
4) ಪ್ರಾಂಶುಪಾಲರು, ಆದಿಚುಂಚನಗಿರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಸರ್ವೆ ನಂ. 112, ನಗರೂರು, ದಾಸನಪುರ ಹೋಬಳಿ, ನೆಲಮಂಗಲ, ಬೆಂಗಳೂರು ದಕ್ಷಿಣ.

ಪ್ರತಿಗಳು:-

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು-1.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಪತ್ರಾಂಕಿತ ಆಪ್ತ ಸಹಾಯಕರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
4. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.